## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1025 |
| 2 | ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣ ಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 14-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಮಹಾನಗರದಲ್ಲಿ ರಸ್ತೆ, ಮರ, ವಿದ್ಯುತ್ ಕಂಬ, ಉದ್ಯಾನ, ಸಾರ್ವಜನಿಕ ಸ್ಥಳ ಹಾಗೂ ಪಾದಚಾರಿ ಮಾರ್ಗಗಳಲ್ಲಿ ಜೇಡರ ಬಲೆಯಂತೆ ಓ.ಎಫ್.ಸಿ ಕೇಬಲ್‌ಗಳು ವ್ಯಾಪಿಸಿ ದ್ವಿಚಕ್ರ ವಾಹನ ಸವಾರರಿಗೆ, ಪಾದಚಾರಿಗಳಿಗೆ ಸಾವಿನ ಕುಣಿಕೆಯಾಗಿ ಪರಿಣಮಿಸಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಹಾಗಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಹೌದು.<br>ಬಿಬಿಎಂಪಿ ವ್ಯಾಪ್ತಿಯಲ್ಲಿ ರಸ್ತೆ, ಮರ, ವಿದ್ಯುತ್ ಕಂಬ, ಉದ್ಯಾನ, ಸಾರ್ವಜನಿಕ ಸ್ಥಳ ಹಾಗೂ ಪಾದಚಾರಿ ಮಾರ್ಗದ ಮೇಲೆ ಹಾಕಿದ್ದಂತಹ ಮತ್ತು ಬಿದ್ದಂತಹ ಓಎಫ್‌ಸಿ ಕೇಬಲ್‌ಗಳನ್ನು ಹಾಗೂ ಅಡೆ ತಡೆಗಳನ್ನು ತೆರವುಗೊಳಿಸಲು ವಾರಕ್ಕೊಮ್ಮೆ ಉಪ ವಿಭಾಗವಾರು / ವಿಭಾಗವಾರು ಕಾರ್ಯಾಚರಣೆಯನ್ನು ಕೈಗೊಂಡು ತೆರವುಗೊಳಿಸಲು ಕ್ರಮ ವಹಿಸಲಾಗುತ್ತಿದೆ. |
| ಆ) | ಓಎಫ್‌ಸಿ ಕೇಬಲ್‌ಗಳನ್ನು ಅಳವಡಿಸುವ ವೇಳೆ ಸೇವಾ ಕಂಪನಿಗಳು ಪಾಲಿಸಬೇಕಾದ ನಿಯಮಗಳೇನು; ಸೇವಾ ಕಂಪನಿಗಳು ಸರ್ಕಾರದ ನಿಯಮಗಳನ್ನು ಪಾಲನೆ ಮಾಡುತ್ತಿದ್ದಾರೆಯೇ; ಪಾಲನೆ ಮಾಡದ ಕಂಪನಿಗಳ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಓಎಫ್‌ಸಿ ಕೇಬಲ್‌ಗಳನ್ನು ಅಳವಡಿಸುವುದಕ್ಕೆ ಸಂಬಂಧಿಸಿದಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಈ ಕೆಳಗಿನ ಆದೇಶಗಳನ್ನು ಹೊರಡಿಸಿರುತ್ತಾರೆ:<br>1. ಸುತ್ತೋಲೆ ಸಂಖ್ಯೆ: PSR(G) 5879, ದಿನಾಂಕ: 29-11-2019.<br>2. ಆದೇಶ ಸಂಖ್ಯೆ: PSR(G)/5870/2019-20, ದಿನಾಂಕ: 19/11/2019.<br>ಪಾಲನೆ ಮಾಡದ ಕಂಪನಿಗಳಿಗೆ ದಂಡವನ್ನು ವಿಧಿಸಲಾಗುತ್ತಿದ್ದು, ಹಲವಾರು ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿರುತ್ತವೆ. |
| ಇ) | ಬೆಂಗಳೂರು ಮಹಾನಗರದಲ್ಲಿ ಎಷ್ಟು ಕಿ.ಮೀ. ಓಎಫ್‌ಸಿ ಕೇಬಲ್ ಅಳವಡಿಸಲಾಗಿದೆ; ಯಾವ ಮಾರ್ಗಗಳಲ್ಲಿ ಅಳವಡಿಸಲಾಗಿರುತ್ತದೆ; ಓಎಫ್‌ಸಿ ಕೇಬಲ್‌ಗಳನ್ನು ಅಳವಡಿಸಲು ಸಂಸ್ಥೆಗಳು ಅನುಮತಿ ಪಡೆದಿವೆಯೇ; | ಬಿಬಿಎಂಪಿ ವ್ಯಾಪ್ತಿಯಲ್ಲಿ 2012 ರಿಂದ 2023ನೇ ಸಾಲಿನವರೆಗೆ 15080.84 ಕಿ.ಮೀ.ಗಳಷ್ಟು ಭೂಗತ ಕೇಬಲ್‌ಗಳನ್ನು ಅಳವಡಿಸಲು ಸೇವಾ ಸಂಸ್ಥೆಗಳಿಗೆ ಅನುಮತಿ ನೀಡಲಾಗಿರುತ್ತದೆ. |

| | | |
|---|---|---|
| ಈ) | ಬೆಂಗಳೂರು ನಗರದಲ್ಲಿ ಓಎಫ್‌ಸಿ ಕೇಬಲ್‌ಗಳಿಂದ ಅವಘಡಗಳು ಸಂಭವಿಸಿ ಗಾಯಗೊಂಡವರು, ಪ್ರಾಣಹಾನಿ ಆಗಿರುವ ಮಾಹಿತಿ ನೀಡುವುದು; ಸದರಿ ಅಕ್ರಮಗಳ ವಿರುದ್ಧ ತೆಗೆದುಕೊಂಡ ಕ್ರಮಗಳ ಮಾಹಿತಿ ನೀಡುವುದು; ನಾಗರೀಕರ ಸುರಕ್ಷತೆ ದೃಷ್ಟಿಯಿಂದ ಅಕ್ರಮ ಕೇಬಲ್‌ಗಳನ್ನು ತೆರವುಗೊಳಿಸುವಲ್ಲಿ ಸೇವಾ ಕಂಪನಿಗಳಿಗೆ ಯಾವ ಸೂಚನೆಗಳನ್ನು ನೀಡಲಾಗಿದೆ ಮತ್ತು ಅವರ ವಿರುದ್ಧ ಏನೇನು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ? | ಬಿಬಿಎಂಪಿ ವ್ಯಾಪ್ತಿಯಲ್ಲಿ ಯಾವುದೇ ಅವಘಡಗಳು ಸಂಭವಿಸಿರುವುದಿಲ್ಲ. ಪ್ರತಿ ಸಹಾಯಕ ಕಾರ್ಯಪಾಲಕ ಅಭಿಯಂತರರು ವ್ಯಾಪ್ತಿಯಲ್ಲಿ ಪ್ರತಿ ವಾರಕ್ಕೊಮ್ಮೆ ಓಎಫ್‌ಸಿ ಕೇಬಲ್‌ಗಳನ್ನು ತೆರವುಗೊಳಿಸಲು ಕಾರ್ಯಾಚರಣೆ ಹಮ್ಮಿಕೊಂಡು ಹಂತ ಹಂತವಾಗಿ ಆದ್ಯತೆ ಮೇರೆಗೆ ತೆರವುಗೊಳಿಸಲಾಗುತ್ತಿದೆ. ನಾಗರಿಕರ ಸುರಕ್ಷತೆ ದೃಷ್ಟಿಯಿಂದ ಸೇವಾ ಸಂಸ್ಥೆಗಳಿಗೆ ಓಎಫ್‌ಸಿ ಕೇಬಲ್‌ಗಳನ್ನು ಹೆಚ್.ಡಿ.ಡಿ. ಆಧಾರದ ಮೇಲೆ ನಿಯಮಾನುಸಾರ ಅಳವಡಿಸಲು ಅನುಮತಿ ನೀಡಲಾಗುತ್ತಿದೆ. |

**ನಅಇ 451 ಎಂಎಸ್‌ಯು 2023**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ